# ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 158 ಟಿಎನ್ ಆರ್ 2020

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:11-09-2020

## ಆದೇಶ

1. ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ಆದೇಶ ಸಂಖ್ಯೆ: 40-3/2020-ಡಿಎಂ-ಐ(ಎ), ದಿನಾಂಕ:29.08.2020ರಲ್ಲಿ ಕಂಟೈನ್‌ಮೆಂಟ್ ವಲಯಗಳನ್ನು ಹೊರತುಪಡಿಸಿದ ಪ್ರದೇಶಗಳಲ್ಲಿ ಇನ್ನೂ ಹೆಚ್ಚಿನ ಕಾರ್ಯಚಟುವಟಿಕೆಗಳನ್ನು ಪುನರಾರಂಭಿಸಲು ಹಾಗೂ ಕಂಟೈನ್‌ಮೆಂಟ್ ವಲಯಗಳಲ್ಲಿ ಲಾಕ್‌ಡೌನ್ ಅವಧಿಯನ್ನು ದಿನಾಂಕ:30.09.2020ರ ವರೆಗೆ ವಿಸ್ತರಿಸಲು ತೆರವು-4 ರ ಮಾರ್ಗಸೂಚಿಗಳನ್ನು ಹೊರಡಿಸಿದೆ.
2. ಕೇಂದ್ರ ಗೃಹ ಮಂತ್ರಾಲಯದ ಆದೇಶವನ್ನು ಅನುಸರಿಸಿ, ರಾಜ್ಯ ಸರ್ಕಾರವು ಸಹ ಸರ್ಕಾರದ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:31.08.2020ರಲ್ಲಿ ಕಂಟೈನ್‌ಮೆಂಟ್ ವಲಯಗಳಲ್ಲಿ ಲಾಕ್‌ಡೌನ್ ಅವಧಿಯನ್ನು ವಿಸ್ತರಿಸಲು ಮತ್ತು ಕಂಟೈನ್‌ಮೆಂಟ್ ಹೊರಗಿನ ಪ್ರದೇಶಗಳಲ್ಲಿ ಇನ್ನೂ ಹೆಚ್ಚಿನ ಕಾರ್ಯಚಟುವಟಿಕೆಗಳನ್ನು ಪುನರಾರಂಭಿಸಲು ತೆರವು-4 ಮಾರ್ಗಸೂಚಿಗಳನ್ನು ಹೊರಡಿಸಿದೆ. ಸದರಿ ಮಾರ್ಗಸೂಚಿಗಳು ದಿನಾಂಕ:30.09.2020 ರವರೆಗೆ ಜಾರಿಯಲ್ಲಿರುತ್ತವೆ.
3. ಈ ಹಿನ್ನೆಲೆಯಲ್ಲಿ, ಕಂಟೈನ್‌ಮೆಂಟ್ ವಲಯಗಳನ್ನು ಹೊರತುಪಡಿಸಿ ಇತರೆ ಎಲ್ಲಾ ವಲಯಗಳಲ್ಲಿನ ಸಾರ್ವಜನಿಕ ಗ್ರಂಥಾಲಯಗಳನ್ನು ತೆರೆಯಲು ಅನುಮತಿ ನೀಡಿ ಆದೇಶಿಸಿದೆ.
4. ಕೋವಿಡ್-19 ಸೋಂಕು ನಿಯಂತ್ರಿಸುವ ಸಂಬಂಧದಲ್ಲಿ ಹೊರಡಿಸಿದ ರಾಷ್ಟ್ರೀಯ ನಿರ್ದೇಶನಗಳನ್ನು ಹಾಗೂ ರಾಜ್ಯ ಸರ್ಕಾರದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಿ, ಗ್ರಂಥಾಲಯ ಪ್ರವೇಶಿಸುವವರನ್ನು ಥರ್ಮಲ್ ತಪಾಸಣೆ ನಡೆಸಿ ಸಂಬಂಧಿಸಿದ ಗ್ರಂಥಾಲಯಗಳ ಮುಖ್ಯಸ್ಥರು ಸಾರ್ವಜನಿಕ ಗ್ರಂಥಾಲಯಗಳ ಸೇವೆಯನ್ನು ಸಾರ್ವಜನಿಕರಿಗೆ ಒದಗಿಸತಕ್ಕದ್ದು.

**(ಅಂಜುಂ ಪರ್ವೇಜ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ
ಸದಸ್ಯ ಕಾರ್ಯದರ್ಶಿ,
ರಾಜ್ಯ ಕಾರ್ಯಕಾರಿ ಸಮಿತಿ

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.